**ದಿನಾಂಕ:25-06-2018ರಂದು ಅಪರಾಹ್ನ 4.15 ಗಂಟೆಗೆ ನಿರ್ದೇಶಕರು(ಪಂ.ರಾಜ್-2) ಹಾಗೂ ಸರ್ಕಾರದ ಪದನಿಮಿತ್ತ ಜಂಟಿಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ದಿನಾಂಕ: 19-03-2018 ರಂದು ರಾಜ್ಯ ಸಚಿವ ಸಂಪುಟದಲ್ಲಿ ಅನುಮೋದನೆಯಾದ ಪಂಚಾಯತ್ ರಾಜ್ ಭವನ ಕಟ್ಟಡ ನಿರ್ಮಾಣದ ಮುಂದಿನ ಪ್ರಕ್ರಿಯೆಗಳ ಬಗ್ಗೆ ಹಾಗೂ ಆರ್.ಜಿ.ಪಿ.ಎಸ್.ಎ ಯೋಜನೆಯಡಿ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡಗಳ ಇತ್ತೀಚಿನ ಪ್ರಗತಿಯ ಕುರಿತು ನಡೆದ ಸಭಾ ನಡವಳಿಗಳು.**

**ಹಾಜರಿದ್ದವರು:**

1. ಶ್ರೀ ಕೆ.ಯಾಲಕ್ಕಿಗೌಡ, ನಿರ್ದೇಶಕರು(ಪಂ.ರಾಜ್-2) ಹಾಗೂ ಸರ್ಕಾರದ ಪದನಿಮಿತ್ತ ಜಂಟಿಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
2. ಶ್ರೀ ಮಹದೇವಸ್ವಾಮಿ, ಮುಖ್ಯ ಅಭಿಯಂತರರು (ಕೇಂದ್ರೀಯ), ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು.
3. ಶ್ರೀ. ನಾರಾಯಣಸ್ವಾಮಿ, ಸಹಾಯಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು.
4. ಶ್ರೀ. ಸಿದ್ಧರಾಮಯ್ಯ, ಉಪಕಾರ್ಯದರ್ಶಿ, ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್.
5. ಶ್ರೀ. ಅರುಣ್‌ಕುಮಾರ್, ಸಹಾಯಕ ಕಾರ್ಯದರ್ಶಿ, ಹಾಸನ ಜಿಲ್ಲಾ ಪಂಚಾಯತ್.
6. ಶ್ರೀ. ಪಂಪಾಪತಿ, ತಾಂತ್ರಿಕ ಸಲಹೆಗಾರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು.
7. ಡಾ. ಜಿ.ಎಸ್.ಗಣೇಶ್ ಪ್ರಸಾದ್, ಬೋಧಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
8. ಶ್ರೀಮತಿ ಎಂ.ಉಮಾದೇವಿ, ಸಹಾಯಕ ಅಭಿಯಂತರರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು.
9. ಶ್ರೀ ಇಂದ್ರಜೀತ್ ಕೆಂಭಾವಿ, ಎ.ಜಿ.ಎಂ.-ತಾಂತ್ರಿಕ, ಕೆಂಭಾವಿ ಆರ್ಕಿಟೆಕ್, ಬೆಂಗಳೂರು.
10. ಶ್ರೀಮತಿ ಆಶಿಕ ಜೋಷಿ, ಕೆಂಭಾವಿ ಆರ್ಕಿಟೆಕ್, ಬೆಂಗಳೂರು.

---

ನಿರ್ದೇಶಕರು(ಪಂ.ರಾಜ್-2) ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ, ದಿನಾಂಕ: 19-03-2018 ರಂದು ರಾಜ್ಯ ಸಚಿವ ಸಂಪುಟದಲ್ಲಿ ಅನುಮೋದನೆಯಾದ ಪಂಚಾಯತ್ ರಾಜ್ ಭವನ ಕಟ್ಟಡ ನಿರ್ಮಾಣದ ಮುಂದಿನ ಪ್ರಕ್ರಿಯೆಗಳ ಬಗ್ಗೆ ಹಾಗೂ ಆರ್.ಜಿ.ಪಿ.ಎಸ್.ಎ ಯೋಜನೆಯಡಿ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡಗಳ ಇತ್ತೀಚಿನ ಪ್ರಗತಿಯ ಕುರಿತು ಚರ್ಚಿಸಿ, ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ರವರ ಅವಗಾಹನೆಗೆ ತರಲು ಈ ಕೆಳಕಂಡ ಅಂಶಗಳ ಬಗ್ಗೆ ನಿರ್ಣಯಿಸಲಾಯಿತು.

1. ದಿನಾಂಕ:23-08-2017ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕೈಗೊಂಡ ತೀರ್ಮಾನದಂತೆ ಮೆ॥ ಕೆಂಭಾವಿ ವಾಸ್ತುಶಿಲ್ಪಿ ಇವರಿಗೆ ಪಂಚಾಯತ್ ರಾಜ್ ಭವನ ಕಟ್ಟಡದ ವಾಸ್ತು ವಿನ್ಯಾಸವನ್ನು ಮಾಡಿರುವುದಕ್ಕೆ ಹಾಗೂ ಕಟ್ಟಡದ ಸಂಪೂರ್ಣ ನಿರ್ಮಾಣದ ಹಂತದಲ್ಲಿ ಮೇಲುಸ್ತುವಾರಿ ಮಾಡಲು ಮತ್ತು ತಾಂತ್ರಿಕ ಸಲಹೆಗಳನ್ನು ನೀಡುವ ಸಲುವಾಗಿ ಕಟ್ಟಡದ ಸಂಪೂರ್ಣ ವೆಚ್ಚದ ಶೇ.1.75ರಷ್ಟು ಸೇವಾ ಶುಲ್ಕವನ್ನು ಕೆ.ಆರ್.ಐ.ಡಿ.ಎಲ್ ಪ್ರಧಾನ ಕಛೇರಿಯ ಅಧಿಕಾರಿಯವರು ಕಟ್ಟಡವು ಹಂತ-ಹಂತವಾಗಿ ಕಾಮಗಾರಿಗಳು ಕೈಗೊಳ್ಳುವ ಸಂದರ್ಭದಲ್ಲಿ ನಿಯಮಾನುಸಾರ ಪರಿಶೀಲಿಸಿ ಬಿಡುಗಡೆಗೊಳಿಸಲು ಸೂಚಿಸಲಾಗಿತ್ತು ಎಂದು ಮುಖ್ಯ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಇವರು ಸಭೆಯ ಗಮನಕ್ಕೆ ತಂದರು.

   ಮೆ॥ ಕೆಂಭಾವಿ ಆರ್ಕಿಟೆಕ್ಟ್ ಇದರ ಪ್ರಧಾನ ವಾಸ್ತುಶಿಲ್ಪಿ ಇವರು ಕೇಂದ್ರ ಸರ್ಕಾರವು ಸರಕು ಮತ್ತು ಸೇವಾ ತೆರಿಗೆ ಜಾರಿಗೆ ತಂದಿರುವ ಹಿನ್ನೆಲೆಯಲ್ಲಿ ಶೇ.1.98 ಸೇವಾ ಶುಲ್ಕವನ್ನು ನೀಡುವಂತೆ ಕೋರಿದರು.

ಮುಖ್ಯ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯವರು ಮಾತನಾಡುತ್ತಾ, ಈಗಾಗಲೇ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ವಿಶ್ವವಿದ್ಯಾಲಯ, ಗದಗ ಇದರ ಕಟ್ಟಡವನ್ನು ಶೇ.1.95ರಷ್ಟರ ಸೇವಾ ಶುಲ್ಕದೊಂದಿಗೆ ನಿರ್ಮಾಣ ಮಾಡುವ ಒಪ್ಪಂದವನ್ನು ಮಾಡಿಕೊಳ್ಳಲಾಗಿದೆ ಎಂದು ಸಭೆಗೆ ತಿಳಿಸಿದರು. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ವಿಶ್ವವಿದ್ಯಾಲಯ, ಗದಗ ಕಟ್ಟಡವನ್ನು ನಿರ್ಮಾಣ ಮಾಡಲು ಶೇ.1.95ರಷ್ಟು ಸೇವಾ ಶುಲ್ಕವನ್ನು ಪಡೆಯುತ್ತಿರುವ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ಶೇ.1.95ರಷ್ಟಕ್ಕಿಂತ ಕಡಿಮೆ ಆಗಬೇಕೆಂದು ಸಭೆಯಲ್ಲಿ ಚರ್ಚಿಸಲಾಯಿತು. ಅದರಂತೆ, ಶೇ.1.90 ಸೇವಾ ಶುಲ್ಕವನ್ನು ನೀಡುವ ಸಂಬಂಧವಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ರವರ ಅವಗಾಹನೆಗೆ ತಂದು ಅನುಮೋದನೆ ನೀಡಿದ್ದಲ್ಲಿ ಮುಂದಿನ ಕ್ರಮವಹಿಸಲು ತೀರ್ಮಾನಿಸಲಾಯಿತು.

2. ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ಹಾಗೂ ಮೆ॥ ಕೆಂಭಾವಿ ಆರ್ಕಿಟೆಕ್ಟ್, ಬೆಂಗಳೂರು ಇವರ ಮಧ್ಯದಲ್ಲಿ ಒಪ್ಪಂದವನ್ನು ಮಾಡಿಕೊಂಡು ಪಂಚಾಯತ್ ರಾಜ್ ಭವನ ಕಟ್ಟಡ ನಿರ್ಮಾಣದ ಮುಂದಿನ ಪ್ರಕ್ರಿಯೆಗಳನ್ನು ಪ್ರಾರಂಭಿಸುವಂತೆ ಅಗತ್ಯ ಕ್ರಮವಹಿಸಲು ತಿಳಿಸಲಾಯಿತು.

3. ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇಲ್ಲಿಯ ಉಪನಿರ್ದೇಶಕರು ಮಾತನಾಡುತ್ತಾ, ಮುಕ್ತಾಯಗೊಂಡ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡಗಳಲ್ಲಿ ತಾತ್ಕಾಲಿಕವಾಗಿ ಆಯಾ ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿನ ಒಬ್ಬರು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹಾಗೂ ಒಬ್ಬರು ದ್ವಿತೀಯ ದರ್ಜೆ ಲೆಕ್ಕ ಸಹಾಯಕರನ್ನು ಅಲ್ಲಿನ ಆಡಳಿತಾತ್ಮಕ ಕಾರ್ಯ ಚಟುವಟಿಕೆಗಳನ್ನು ಕೈಗೊಳ್ಳಲು ನಿಯೋಜನೆಯ ಮೇರೆಗೆ ತೆಗೆದುಕೊಳ್ಳಲು ಸಭೆಯ ಗಮನಕ್ಕೆ ತಂದರು. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ಯವರ ಅನುಮೋದನೆಯ ನಂತರ ಕ್ರಮವಹಿಸಬಹುದು ಎಂದು ನಿರ್ದೇಶಕರು(ಪಂ.ರಾಜ್-2) ಸಭೆಗೆ ತಿಳಿಸಿದರು.

4. ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ಇಲ್ಲಿಯ ಮುಖ್ಯ ಅಭಿಯಂತರರು ಮಾತನಾಡುತ್ತಾ, ಈಗಾಗಲೇ ರಾಜ್ಯದ 15 ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಜಿಲ್ಲಾ ಪಂಚಾಯತ್ ಕೇಂದ್ರ ಸಂಪನ್ಮೂಲ ಕೇಂದ್ರ ಕಟ್ಟಡಗಳು ಮುಕ್ತಾಯಗೊಂಡಿರುತ್ತವೆ ಎಂದು ಸಭೆಯ ಗಮನಕ್ಕೆ ತಂದರು. ಈ ರೀತಿಯಾಗಿ ಮುಕ್ತಾಯಗೊಂಡಿರುವ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರಗಳನ್ನು ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 241 ಜಿಪಸ 2014, ದಿನಾಂಕ:12-12-2017ರ ಪ್ರಕಾರ ಆಯಾ ಜಿಲ್ಲಾ ಪಂಚಾಯತಿಗಳ ವ್ಯಾಪ್ತಿಗೆ ವಹಿಸದೇ ಇದ್ದರೆ ಅಂತಹ ಕಟ್ಟಡಗಳನ್ನು ಕೂಡಲೇ ಜಿಲ್ಲಾ ಪಂಚಾಯತಿ ವ್ಯಾಪ್ತಿಗೆ ಹಸ್ತಾಂತರಿಸುವಂತೆ ತಿಳಿಸಲಾಯಿತು. ಮುಕ್ತಾಯಗೊಂಡಿರುವ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡಗಳಲ್ಲಿ ಅಂತಿಮ ಮೂಲಭೂತ ಸೌಲಭ್ಯಗಳಾದ ಟ್ರಾನ್ಸ್‌ಫಾರ್‌ಮರ್‌ಗಳನ್ನು ಅಳವಡಿಸುವುದು, ವಿದ್ಯುತ್ ಸಂಪರ್ಕ ಕಲ್ಪಿಸುವುದು, ಸೋಲಾರ್ ವ್ಯವಸ್ಥೆಯನ್ನು ಅಳವಡಿಸುವುದು, ಕಾವಲುಗಾರನ ವ್ಯವಸ್ಥೆಯನ್ನು ಕಲ್ಪಿಸುವುದು, ಬೋರ್‌ವೆಲ್‌ಗಳ ಮೂಲಕ ನೀರಿನ ವ್ಯವಸ್ಥೆಯನ್ನು ಮಾಡುವುದು ಇತ್ಯಾದಿ ಮೂಲಭೂತ ಸೌಲಭ್ಯಗಳನ್ನು ಉಳಿದ ಲಭ್ಯವಿರುವ ಅನುದಾನದಿಂದ ನಿಯಮಾನುಸಾರ ಕಲ್ಪಿಸುವಂತೆ ತಿಳಿಸಲಾಯಿತು.

5. ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ಇಲ್ಲಿಯ ಮುಖ್ಯ ಅಭಿಯಂತರರು ಮಾತನಾಡುತ್ತಾ, ಉಡುಪಿ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರವು ಮುಕ್ತಾಯಗೊಂಡಿದ್ದು, ಕಲಬುರಗಿ-ಜುಲೈ 2018, ಕೊಡಗು-ಆಗಸ್ಟ್ 2018, ಉತ್ತರ ಕನ್ನಡ, ಬೆಳಗಾವಿ ಹಾಗೂ ತುಮಕೂರು- ಸೆಪ್ಟೆಂಬರ್ 2018, ದಕ್ಷಿಣ ಕನ್ನಡ- ಅಕ್ಟೋಬರ್ 2018 ರೊಳಗಾಗಿ ಮುಕ್ತಾಯಗೊಳಿಸಿ, ಆಯಾ ಜಿಲ್ಲಾ ಪಂಚಾಯತಿಗಳಿಗೆ ವಹಿಸಿಕೊಡುವುದಾಗಿ ಸಭೆಗೆ ತಿಳಿಸಿದರು. ಮಂಡ್ಯ, ಕೋಲಾರ, ರಾಯಚೂರು ಜಿಲ್ಲೆಗಳಲ್ಲಿ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡಗಳನ್ನು ನಿರ್ಮಾಣ ಮಾಡಲು ನಿವೇಶನಗಳನ್ನು ಹಸ್ತಾಂತರಿಸುವಂತೆ ಆಯಾ ಜಿಲ್ಲಾಧಿಕಾರಿಗಳಿಗೆ ಪತ್ರವನ್ನು ಮತ್ತೊಮ್ಮೆ ಬರೆಯಲು ನಿರ್ಧರಿಸಲಾಯಿತು.

6. ಗದಗ ಹಾಗೂ ಧಾರವಾಡ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರಗಳ ನಿರ್ಮಾಣದ ಕುರಿತು ಅನುದಾನವನ್ನು ಕೋರಿ ಆರ್ಥಿಕ ಇಲಾಖೆಗೆ ಕಡತವನ್ನು ಕಳುಹಿಸಲಾಗಿದ್ದು, ಈ ಕುರಿತು ಆರ್ಥಿಕ ಇಲಾಖೆಯ ಅಭಿಪ್ರಾಯದಂತೆ ಮುಂದಿನ ಕ್ರಮವಹಿಸಲು ತೀರ್ಮಾನಿಸಲಾಯಿತು. ಇದರೊಂದಿಗೆ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರಗಳಲ್ಲಿ ನಿಯೋಜನೆ/ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ಅಧಿಕಾರಿ/ನೌಕರರನ್ನು ತೆಗೆದುಕೊಳ್ಳಲು ಆರ್ಥಿಕ ಇಲಾಖೆಯ ಸಹಮತಿಯನ್ನು ಕೋರಿ ಕಡತವನ್ನು ಕಳುಹಿಸಿಕೊಡಲಾಗಿದ್ದು, ಆರ್ಥಿಕ ಇಲಾಖೆಯ ಅನುಮೋದನೆ ದೊರೆತ ನಂತರ ಈಗಾಗಲೇ ಕೇಂದ್ರ ಸರ್ಕಾರವು 2017-18ನೇ ಸಾಲಿನಲ್ಲಿ ಆವರ್ತಕ ವೆಚ್ಚವಾಗಿ 10 ಜಿಲ್ಲಾ ಸಂಪನ್ಮೂಲ ಕೇಂದ್ರಗಳಿಗೆ ತಲಾ ರೂ.10.00ಲಕ್ಷಗಳ ಹಾಗೆ ಒಟ್ಟಾರೆ ರೂ.1.00ಕೋಟಿಗಳನ್ನು ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳಿಗೆ ಬಿಡುಗಡೆಗೊಳಿಸಲು ಕ್ರಮವಹಿಸಲಾಗುವುದೆಂದು ಸಭೆಯ ಗಮನಕ್ಕೆ ತರಲಾಯಿತು.

7. ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರಗಳಿಗೆ ಪೀಠೋಪಕರಣಗಳು ಹಾಗೂ ಇನ್ನಿತರ ಮೂಲಭೂತ ಸೌಲಭ್ಯಗಳನ್ನು ಒದಗಿಸುವಂತೆ ಕೇಂದ್ರ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯಕ್ಕೆ 2018-19ನೇ ಸಾಲಿನ ಕ್ರಿಯಾ ಯೋಜನೆಯ ಕುರಿತು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರುರವರೊಂದಿಗೆ ಚರ್ಚಿಸಿ ಪ್ರಸ್ತಾವನೆಯನ್ನು ಸಲ್ಲಿಸಲು ತಿಳಿಸಲಾಯಿತು.

ಮೇಲ್ಕಂಡ ಎಲ್ಲಾ ವಿಷಯಗಳ ಬಗ್ಗೆ ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ರವರ ಗಮನಕ್ಕೆ ತಂದು ಅವರ ಅನುಮೋದನೆಯನ್ನು ಪಡೆದುಕೊಂಡ ನಂತರ ಅಗತ್ಯ ಕ್ರಮ ಕೈಗೊಳ್ಳಬಹುದು ಎಂದು ನಿರ್ದೇಶಕರು(ಪಂ.ರಾಜ್-2)ರವರು ಸಭೆಗೆ ತಿಳಿಸಿದರು.

ಅಂತಿಮವಾಗಿ ನಿರ್ದೇಶಕರು(ಪಂ.ರಾಜ್-2)ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳನ್ನು ವಂದಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

5/7/18

(ಕೆ.ಯಾಲಕ್ಕಿಗೌಡ)
ನಿರ್ದೇಶಕರು (ಪಂ.ರಾಜ್-2)ಹಾಗೂ
ಸರ್ಕಾರದ ಪದನಿಮಿತ್ತ ಜಂಟಿಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
2. ನಿರ್ದೇಶಕರು (ಪಂ.ರಾಜ್-1), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
3. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು.
5. ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮಗಾಂಧಿ ಗ್ರಾಮೀಣ ಇಂಧನ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.

**ಪ್ರತಿಯನ್ನು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
2. ನಿರ್ದೇಶಕರು (ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರಿಗೆ.
3. ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.